ಆ) ಈ ಭಾಗದ ಗ್ರಾಮಾಂತರ ಪ್ರದೇಶಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಶು ಆರೋಗ್ಯ ಕೇಂದ್ರಗಳನ್ನು ಹೊಸದಾಗಿ ಮಂಜೂರು ಮಾಡಿಕೊಟ್ಟು ರೈತಾಪಿ ವರ್ಗದವರ ಜಾನುವಾರುಗಳ ಚಿಕಿತ್ಸೆಗೆ ಅನುಕೂಲವನ್ನು ಯಾವಾಗ ಮಾಡಿಕೊಡಲಾಗುವುದು?

ಶ್ರೀ ಮಿರಾಜುದ್ದೀನ್ ಎನ್. ಪಟೇಲ್ (ಪಶುಸಂಗೋಪನೆ ಮತ್ತು ವಕ್ಫ್ ಸಚಿವರು)

ಅ) ಬಂದಿದೆ.

ಆ) ರಾಜ್ಯದಲ್ಲಿ ಹೊಸ ಪಶುವೈದ್ಯಕೀಯ ಸಂಸ್ಥೆಗಳನ್ನು ಮಂಜೂರು ಮಾಡುವ ಕಾರ್ಯಕ್ರಮ ಇರುವುದಿಲ್ಲ. ಆದರೂ ಕೂಡಾ ಹಾಲಿ ಇರುವ ಸಂಸ್ಥೆಗಳಿಂದ ಪಶು ವೈದ್ಯಕೀಯ ಸೇವೆಯನ್ನು ಒದಗಿಸಲಾಗುತ್ತಿದೆ.

ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳು

104 (257) : ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳೆಷ್ಟು;

ಆ) ಈ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು)

ಅ) 402

ಆ) ಪ್ರಸಕ್ತ ಸಾಲಿನ ಶೈಕ್ಷಣಿಕ ಕಾರ್ಯಭಾರವನ್ನಾಧರಿಸಿ ಮಂಜೂರಾದ ಖಾಲಿ ಹುದ್ದೆಗಳಲ್ಲಿ ಸಧ್ಯಕ್ಕೆ ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆಯಾದ ಬ್ಯಾಕ್ ಲಾಗ್ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುತ್ತಿದೆ, ಮತ್ತು ಅರೆಕಾಲಿಕ ಉಪನ್ಯಾಸಕರ ಸೇವಾ ಸಕ್ರಮಾತಿ ಮಾಡುವುದರ ಮೂಲಕ ಭರ್ತಿ ಮಾಡಲೂ ಸಹ ಕ್ರಮಕೈಗೊಳ್ಳಲಾಗುತ್ತದೆ.

ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳಿಗೆ ಪ್ರಥಮ ದರ್ಜೆ ಕಾಲೇಜುಗಳ ಕೊರತೆ

105 (258) : ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳು ಪ್ರಥಮ ದರ್ಜೆ ಕಾಲೇಜುಗಳ ಕೊರತೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಪ್ರಸಕ್ತ ವರ್ಷ ಸರ್ಕಾರ ನೂತನ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಲು ಇಚ್ಛಿಸಿದೆಯೇ;

ಇ) ಹಾಗಿದ್ದಲ್ಲಿ, ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು)

ಅ) ಹೌದು.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.